IV) ಶ್ರೀ ಲಕ್ಷ್ಮಣ ಎಸ್.ಸವದಿ (ಮಾನ್ಯ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು): ಮಾನ್ಯ ಅಧ್ಯಕ್ಷರೆ,

1959ರ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದ ಪ್ರಕರಣ 130ರ ಅಡಿಯಲ್ಲಿ

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1959ರ ಪ್ರಕರಣ 129 (1)ರಡಿಯಲ್ಲಿ 2008ರ ನಿಯಮ 1ರ ಉಪನಿಯಮ 2ಕ್ಕೆ ತಿದ್ದುಪಡಿ ಮಾಡಿ ಹೊರಡಿಸಿರುವ ಅಧಿಸೂಚನೆ ಸಂಖ್ಯೆ/ಸಿಓ/192/ಸಿಎಲ್ಎಂ/2010 ದಿನಾಂಕ 02.05.2011ನ್ನು ಮಂಡಿಸುತ್ತೇನೆ.

ಅಧ್ಯಕ್ಷರು ಮಂಡಿಸಲಾಯಿತು.

I. ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ) ಮಾನ್ಯ ಅಧ್ಯಕ್ಷರೆ,

1. ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (7)ರನ್ವಯ ಘನತೆವೆತ್ತ ರಾಜ್ಯಪಾಲರ ಆದೇಶನುಸಾರ ಕೆ.ಆರ್.ಪುರಂ ಹೋಬಳಿ ಕುಂದನಹಳ್ಳಿ ಗ್ರಾಮದ ಸರ್ವೆ ನಂಬರ್ 124/1 ರಲ್ಲಿನ ಸಿ.ಎ.ನಿವೇಶನಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಕ್ಷೆ ಮಾಡಲಾದ ಬಗ್ಗೆ ಲೋಕಾಯುಕ್ತರ ವಿಶೇಷ ವರದಿ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 1976ರ ಕಲಂ 47(5) ಹಾಗೂ 47(ಎ)ರ ಮೇರೆಗೆ:

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಹಾಗೂ 2010–11ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

II. ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಮಾನ್ಯ ಅಧ್ಯಕ್ಷರೆ,

1973 ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾಯ್ದೆಯ ಕಲಂ 39ರ ಮೇರೆಗೆ:

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು 2009–10ನೇ ಸಾಲಿನ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮಂಡಿಸುತ್ತೇನೆ.